# ಕುವೆಂಪು ವಿಶ್ವವಿದ್ಯಾಲಯ

## ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ನಡಾವಳಿಗಳು

**ಸಭಾ ದಿನಾಂಕ : 18-08-2021**

**ಪ್ರಾಧಿಕಾರಗಳ ವಿಭಾಗ**
ಜ್ಞಾನಸಹ್ಯಾದ್ರಿ, ಶಂಕರಘಟ್ಟ 577 451
ಶಿವಮೊಗ್ಗ ಜಿಲ್ಲೆ.

ಫ್ಯಾಕ್ಸ್: 08282-256262
ಇ-ಮೇಲ್: drsyndicateku@gmail.com

☎08282-256148 (ಪ್ರಾಧಿಕಾರಗಳ ವಿಭಾಗ)
ವೆಬ್‌ಸೈಟ್:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ- 577 451

ಸಂಖ್ಯೆ: ಕುವಿ:ಯುಎಟಿ-1:ಎ.ಸಿ.02-21:190:2021-22 ದಿನಾಂಕ:06-09-2021

ಮಾನ್ಯರೆ,

ವಿಷಯ:ದಿನಾಂಕ:18-08-2021ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಸಾಮಾನ್ಯ ಸಭೆಯ ನಡಾವಳಿಗಳು.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ - 2000ರ ಪ್ರಕರಣ - 31(xviii) ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ- 17ರನ್ವಯ ದಿನಾಂಕ:18-08-2021ರಂದು ವಿಶ್ವವಿದ್ಯಾಲಯದ **"ಪ್ರೊ. ಎಸ್.ಪಿ. ಹಿರೇಮಠ್ ಸಭಾಂಗಣ"ದಲ್ಲಿ** ನಡೆದ ವಿದ್ಯಾವಿಷಯಕ ಪರಿಷತ್ತಿನ ಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ- 17ರ ಕಂಡಿಕೆ (2) ರ ಪ್ರಕಾರ ಸದರಿ ನಡಾವಳಿಗಳನ್ನು ಕಳುಹಿಸಿದ 21 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ

ಗೆ,

ವಿದ್ಯಾವಿಷಯಕ ಪರಿಷತ್ತಿನ ಎಲ್ಲಾ ಸದಸ್ಯರುಗಳಿಗೆ.

ಪ್ರತಿಗಳು:-

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8) ನಿರ್ದೇಶಕರು,ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9) ಎಲ್ಲಾ ಅಧ್ಯಕ್ಷರು / ಸಂಚಾಲಕರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ./ಶಿವಮೊಗ್ಗ/ ಕಡೂರು./ ಚಿಕ್ಕಮಗಳೂರು
10) ಎಲ್ಲಾ ಉಪಕುಲಸಚಿವರು./ಸಹಾಯಕ ಕುಲಸಚಿವರುಗಳು/ ಅಧೀಕ್ಷಕರುಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
11) ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ ಶಿವಮೊಗ್ಗ.
12) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ಬಿ.ಹೆಚ್ ರಸ್ತೆ ಕಡೂರು.
13) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಚಿಕ್ಕಮಗಳೂರು. ಕುವೆಂಪು ವಿಶ್ವವಿದ್ಯಾಲಯ
14) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
15) ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
16) ಕಾರ್ಯಪಾಲಕ ಅಭಿಯಂತರರು, ವಿಶ್ವವಿದ್ಯಾಲಯ ಇಂಜಿನಿಯರಿಂಗ್ ವಿಭಾಗ, ವಿಶ್ವವಿದ್ಯಾಲಯ, ಶಂಕರಘಟ್ಟ.
17) ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಛಯ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ.
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
19) ಕಛೇರಿ ಪ್ರತಿ.

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:18-08-2021 ರಂದು ಬುಧವಾರ ಪೂರ್ವಾಹ್ನ:11.00 ಗಂಟೆಗೆ ವಿಶ್ವವಿದ್ಯಾಲಯದ "ಪ್ರೊ. ಎಸ್.ಪಿ. ಹಿರೇಮಠ್ ಸಭಾಂಗಣ"ದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಸಾಮಾನ್ಯ ಸಭೆಯ ನಡಾವಳಿಗಳು.

**ಹಾಜರಿದ್ದ ಸದಸ್ಯರು :**

| | | |
|---|---|---|
| 1. | ಪ್ರೊ. ಬಿ.ಪಿ ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀಮತಿ ಅನುರಾಧ ಜಿ. ಕೆ.ಎ.ಎಸ್.(ಆಯ್ಕೆ ಶ್ರೇಣಿ), ಕುಲಸಚಿವರು | ಸದಸ್ಯ ಕಾರ್ಯದರ್ಶಿ |
| 3. | ಪ್ರೊ. ಸಿ.ಎಂ. ತ್ಯಾಗರಾಜ, ಕುಲಸಚಿವರು(ಮೌಲ್ಯಮಾಪನ) | ಸದಸ್ಯರು |
| 4. | ಡಾ. ಅಶೋಕ್ ಡಿ. ರೇವಣ್‌ಕರ್ ಕಾಲೇಜು ಶಿಕ್ಷಣ ಇಲಾಖೆ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಶ್ರೀ ಎಸ್. ರುದ್ರೇಗೌಡ ವಿಧಾನ ಪರಿಷತ್ ಸದಸ್ಯರು, ಶಿವಮೊಗ್ಗ | ಸದಸ್ಯರು |
| 6. | ಶ್ರೀ ವಿನಯ ಕುಮಾರ್ ಶೆಟ್ಟಿ ಪ್ರಾಂಶುಪಾಲರು | ಸದಸ್ಯರು |
| 7. | ಡಾ. ಹೆಚ್. ರಾಜೇಶ್ವರಿ ಪ್ರಾಂಶುಪಾಲರು | ಸದಸ್ಯರು |
| 8. | ಡಾ. ವಿಷ್ಣುಮೂರ್ತಿ ಕೆ.ಎ. ಪ್ರಾಂಶುಪಾಲರು | ಸದಸ್ಯರು |
| 9. | ಶ್ರೀ ರಾಜಶೇಖರ ಪಿ.ಬಿ. ಪ್ರಾಂಶುಪಾಲರು | ಸದಸ್ಯರು |
| 10. | ಶ್ರೀಮತಿ ಭಾರತಿ ಪ್ರಾಂಶುಪಾಲರು | ಸದಸ್ಯರು |
| 11. | ಶ್ರೀ ನಟೇಶ ಎಸ್.ಎಂ. ಪ್ರಾಂಶುಪಾಲರು | ಸದಸ್ಯರು |
| 12. | ಶ್ರೀ ಬಿ.ಸಿ. ಬಸವರಾಜಪ್ಪ ಪ್ರಾಂಶುಪಾಲರು | ಸದಸ್ಯರು |
| 13. | ಶ್ರೀ ಮಹಾಲಿಂಗಪ್ಪ ಈ. ಪ್ರಾಂಶುಪಾಲರು | ಸದಸ್ಯರು |
| 14. | ಡಾ. ಎಂ. ಸ್ವಾಮಿ ಪ್ರಾಂಶುಪಾಲರು | ಸದಸ್ಯರು |
| 15. | ಡಾ. ರಾಮಚಂದ್ರ ದೇವರು ಹೆಗಡೆ ಪ್ರಾಂಶುಪಾಲರು | ಸದಸ್ಯರು |
| 16. | ಶ್ರೀ ಚಂದ್ರಶೇಖರ ಎಸ್. | ಸದಸ್ಯರು |
| 17. | ಶ್ರೀ ಎಂ.ಎ. ರಮೇಶ್ ಹೆಗಡೆ | ಸದಸ್ಯರು |
| 18. | ಶ್ರೀಮತಿ ಗೀತಾಂಜಲಿ | ಸದಸ್ಯರು |
| 19. | ಶ್ರೀಮತಿ ಮಮತಾ ಸಾಲಿ | ಸದಸ್ಯರು |
| 20. | ಶ್ರೀ ಕುಮಾರೇಗೌಡ | ಸದಸ್ಯರು |
| 21. | ಶ್ರೀ ಮನೋಜ್ ಸಲ್ದಾನಾ | ಸದಸ್ಯರು |
| 22. | ಡಾ. ರವಿಕಿರಣ ಹೆಚ್.ಕೆ. | ಸದಸ್ಯರು |
| 23. | ಶ್ರೀ ಶಿವಣ್ಣ ಪಿ. | ಸದಸ್ಯರು |
| 24. | ಪ್ರೊ. ಹೆಚ್.ಎಸ್. ಭೋಜ್ಯಾನಾಯ್ಕ, ಪ್ರಾಧ್ಯಾಪಕರು | ಸದಸ್ಯರು |
| 25. | ಪ್ರೊ. ರಾಮಚಂದ್ರ ವೈ.ಎಲ್. ಪ್ರಾಧ್ಯಾಪಕರು | ಸದಸ್ಯರು |
| 26. | ಪ್ರೊ. ರಾಜಾನಾಯಕ ಪ್ರಾಧ್ಯಾಪಕರು | ಸದಸ್ಯರು |
| 27. | ಪ್ರೊ. ರೇಚಲ್ ಕುರಿಯನ್ ಪ್ರಾಧ್ಯಾಪಕರು | ಸದಸ್ಯರು |
| 28. | ಪ್ರೊ. ಜಯರಾಮ್ ಭಟ್ ಡೀನರು, ಕಲಾನಿಕಾಯ | ಸದಸ್ಯರು |
| 29. | ಪ್ರೊ. ರಿಯಾಜ್ ಮಹಮೂದ್ ಡೀನರು, ವಿಜ್ಞಾನ ನಿಕಾಯ | ಸದಸ್ಯರು |
| 30. | ಪ್ರೊ. ಹೆಚ್.ಎನ್. ರಮೇಶ್, ವಾಣಿಜ್ಯ ನಿಕಾಯದ ಡೀನರು, | ಸದಸ್ಯರು |
| 31. | ಡಾ. ಗೀತಾ ಸಿ., ಶಿಕ್ಷಣ ನಿಕಾಯ ಡೀನರು, | ಸದಸ್ಯರು |
| 32. | ಡಾ. ಆರ್.ಹೆಚ್. ವಾಲ್ಮೀಕಿ ಗ್ರಂಥಪಾಲಕರು, (ಪ್ರಭಾರ) | ಸದಸ್ಯರು |
| 33. | ಪ್ರೊ. ಹೆಚ್.ಎಸ್. ಜಯಣ್ಣ, ನಿರ್ದೇಶಕರು ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ, | ಸದಸ್ಯರು |
| 34. | ಪ್ರೊ. ಗುರುಲಿಂಗಯ್ಯ ಎಂ., ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ | ಸದಸ್ಯರು |
| 35. | ಡಾ. ಎನ್.ಡಿ. ವಿರೂಪಾಕ್ಷ (ಪ್ರಭಾರ), ನಿರ್ದೇಶಕರು, ದೈಹಿಕ ಶಿಕ್ಷಣ, | ಸದಸ್ಯರು |
| 36. | ಶ್ರೀ ಎಸ್. ರಾಮಕೃಷ್ಣ , ಹಣಕಾಸು ಅಧಿಕಾರಿಗಳು | ಸದಸ್ಯರು |
| 37. | ಪ್ರೊ. ಹೆಚ್.ಎಸ್. ಜಯಣ್ಣ, ನಿರ್ದೇಶಕರು ಐ.ಕ್ಯೂ.ಎ.ಸಿ | ವಿಶೇಷ ಆಹ್ವಾನಿತರು |
| 38. | ಪ್ರೊ. ಯೋಗೀಶ್ ಎಸ್.ಎನ್. ನಿರ್ದೇಶಕರು ದೂರ ಶಿಕ್ಷಣ ನಿರ್ದೇಶನಾಲಯ | ವಿಶೇಷ ಆಹ್ವಾನಿತರು |

**ಗೈರು ಹಾಜರಾದ ಸದಸ್ಯರು :**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು — ಸದಸ್ಯರು
2. ಶ್ರೀ ಎಸ್.ಎಲ್. ಭೋಜೇಗೌಡ, ವಿಧಾನ ಪರಿಷತ್ ಸದಸ್ಯರು, ಚಿಕ್ಕಮಗಳೂರು. — ಸದಸ್ಯರು
3. ಶ್ರೀಮತಿ ಎಸ್.ಬಿ. ಅನುಪಮ — ಸದಸ್ಯರು
4. ಪ್ರೊ. ವೈ.ಎಲ್. ಕೃಷ್ಣಮೂರ್ತಿ ಪ್ರಾಧ್ಯಾಪಕರು — ಸದಸ್ಯರು
5. ಡಾ. ನಾಗರಾಜ. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್. — ಸದಸ್ಯರು

**ಪ್ರಸ್ತಾವನೆ:**

ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರಿಗೆ ಹಾಗೂ ನೂತನವಾಗಿ ನಾಮನಿರ್ದೇಶನಗೊಂಡ ಸದಸ್ಯರಿಗೆ ಮಾನ್ಯ ಕುಲಸಚಿವರು ವಿದ್ಯಾವಿಷಯಕ ಪರಿಷತ್ ಸಭೆಯ ಪರವಾಗಿ ಆತ್ಮೀಯವಾಗಿ ಸ್ವಾಗತ ಕೋರಿದರು.

ನಂತರ ಮಾನ್ಯ ಕುಲಪತಿಗಳು ವಿಶ್ವವಿದ್ಯಾಲಯದ ನೂತನ ಕುಲಸಚಿವರಾಗಿ ನೇಮಕಗೊಂಡಿರುವ ಶ್ರೀಮತಿ ಅನುರಾಧ ಜಿ. ಕೆ.ಎ.ಎಸ್. (ಆಯ್ಕೆ ಶ್ರೇಣಿ), ಇವರಿಗೆ ಹಾಗೂ ಕುಲಸಚಿವ(ಪರೀಕ್ಷಾಂಗ)ರಾಗಿ ನೇಮಕಗೊಂಡಿರುವ ಪ್ರೊ. ತ್ಯಾಗರಾಜ ಸಿ.ಎಂ. ಇವರಿಗೆ ಆತ್ಮೀಯವಾಗಿ ಸ್ವಾಗತ ಕೋರಿದರು. ಹಾಗೂ ವಿಶ್ವವಿದ್ಯಾಲಯದ ವಿದ್ಯಾವಿಷಯಕ ಪರಿಷತ್ತಿಗೆ ರಾಜ್ಯ ಸರ್ಕಾರದಿಂದ ನೂತನವಾಗಿ ನಾಮ ನಿರ್ದೇಶನಗೊಂಡಿರುವ ಶ್ರೀಮತಿ ಎಸ್.ಬಿ. ಅನುಪಮ ಹಾಗೂ ಪ್ರಾಂಶುಪಾಲರ ಜೇಷ್ಠತೆಯಲ್ಲಿ ನಾಮನಿರ್ದೇಶನಗೊಂಡಿರುವ ಶ್ರೀ ವಿನಯ್ ಕುಮಾರ್ ಇವರನ್ನು ಸಭೆಗೆ ಆತ್ಮೀಯವಾಗಿ ಸ್ವಾಗತಿಸಿದರು. ಹಾಗೂ ವಿಶ್ವವಿದ್ಯಾಲಯದ ಶ್ರೇಯೋಭಿವೃದ್ಧಿಗಾಗಿ ಮತ್ತು ಸರ್ವತೋಮುಖ ಏಳಿಗೆಗಾಗಿ ಎಲ್ಲಾ ಪ್ರಾಧಿಕಾರಗಳ ಸದಸ್ಯರು, ಅಧ್ಯಾಪಕರು ಹಾಗೂ ಅಧಿಕಾರಿಗಳು ಸಹಕಾರವನ್ನು ನೀಡಬೇಕೆಂದು ಕೋರಿದರು.

ಸದಸ್ಯರಾದ ಡಾ. ಎನ್.ಡಿ. ವಿರೂಪಾಕ್ಷ – ಇವರು ಮಾತನಾಡಿ ವಿಶ್ವವಿದ್ಯಾಲಯದ ದೈಹಿಕ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಹಾಗೂ ಇತರೆ ವಿದ್ಯಾರ್ಥಿಗಳ ಉಪಯೋಗಕ್ಕಾಗಿ ಸುಸಜ್ಜಿತವಾದ ಜಿಮ್ ಪ್ರಾರಂಭಿಸುವ ಅಗತ್ಯ ಇದೆ ಎಂದರು. ಈ ಕುರಿತು ಮಾತನಾಡಿದ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್. ರುದ್ರೇಗೌಡ, ಇವರು ಜಿಮ್ ಸ್ಥಾಪನೆಯ ಸಂಬಂಧ ಎಮ್.ಎಲ್.ಸಿ. ಸಹಾಯನಿಧಿಯಿಂದ ಹಣಕಾಸು ನೆರವು ನೀಡುವ ಬಗ್ಗೆ ಮುಂದಿನ ದಿನಗಳಲ್ಲಿ ಪ್ರಯತ್ನಿಸಲಾಗುವುದೆಂದು ತಿಳಿಸಿದರು. ಅಲ್ಲದೇ ವಿಶ್ವವಿದ್ಯಾಲಯದ ಯಾವ ಯಾವ ವಿಭಾಗಗಳಲ್ಲಿ ಎಷ್ಟು ದತ್ತಿನಿಧಿ ಸ್ವರ್ಣ ಪದಕಗಳನ್ನು ಸ್ಥಾಪಿಸಲಾಗಿದೆ. ಹಾಗೂ ಯಾವ ವಿಭಾಗಗಳಿಗೆ ಯಾವುದೇ ಪದಕಗಳನ್ನು ಇಟ್ಟಿರುವುದಿಲ್ಲ ಎಂಬ ಬಗ್ಗೆ ವಿವರವಾದ ಪಟ್ಟಿಯನ್ನು ತಮಗೆ ನೀಡುವಂತೆ ಕೋರಿದರು. ತಾವು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಿಗಾಗಿ ನಾಲ್ಕು ದತ್ತಿನಿಧಿಗಳನ್ನು ಸ್ಥಾಪಿಸುವುದಾಗಿ ತಿಳಿಸಿದರು. ಇವರಿಗೆ ಮಾನ್ಯ ಕುಲಪತಿಗಳು ಹಾಗೂ ಕುಲಸಚಿವರು ಎಲ್ಲಾ ಸದಸ್ಯರ ಪರವಾಗಿ ಧನ್ಯವಾದ ತಿಳಿಸಿದರು.

ನಂತರ ಕಾರ್ಯಸೂಚಿಯಲ್ಲಿರುವಂತೆ ವಿಷಯಗಳನ್ನು ಕೈಗೆತ್ತಿಕೊಳ್ಳಲಾಯಿತು.

**2021:ಎಸಿ–3.01:** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಕಾಯ್ದೆ–2000 ರನ್ವಯ ಘನತೆವೆತ್ತ ಕುಲಾಧಿಪತಿಗಳಿಂದ ಅಂಕಿತಗೊಂಡಿರುವ ಪರಿನಿಯಮಗಳು, ಆಧ್ಯಾದೇಶಗಳು, ವಿನಿಯಮಗಳು ಮತ್ತು ನಿಯಮಗಳಿಗೆ ಸಂಬಂಧಿಸಿದ ವರದಿ.

**ನಿರ್ಣಯ:** ಯಾವುದೂ ಇರುವುದಿಲ್ಲ.

**2021:ಎಸಿ–3.02:** ಕಾರ್ಯಸೂಚಿಯಲ್ಲಿ ಸೂಚಿಸಲಾಗಿರುವ ಕಾರ್ಯಕಲಾಪದ ಕ್ರಮದಲ್ಲಿ ಬದಲಾವಣೆಗಾಗಿ ಯಾವುದೇ ಗೊತ್ತುವಳಿ ಮಂಡಿಸುವುದು.

ನಿರ್ಣಯ: ಯಾವುದೂ ಇರುವುದಿಲ್ಲ.

**2021:ಎಸಿ–3.03:** ಮಾನ್ಯ ಕುಲಪತಿಗಳು ಅಥವಾ ಸಿಂಡಿಕೇಟ್ ಮಂಡಿಸಿದ ವಿಷಯಗಳು

ನಿರ್ಣಯ: ಯಾವುದೂ ಇರುವುದಿಲ್ಲ.

## ಪ್ರಾಧಿಕಾರಗಳ ವಿಭಾಗ

**2021:ಎಸಿ–3.04:** ದಿನಾಂಕ:30–03–2021 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ನಡಾವಳಿಗಳ ದೃಢೀಕರಣ.

ನಿರ್ಣಯ: ಚರ್ಚೆಯ ನಂತರ ದಿನಾಂಕ:30–03–2021 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಾಮಾನ್ಯ ಸಭೆಯ ನಡಾವಳಿಯನ್ನು ಯಥಾವತ್ತಾಗಿ ದೃಢೀಕರಿಸಲಾಯಿತು.

## ಶೈಕ್ಷಣಿಕ ವಿಭಾಗ

**2021:ಎಸಿ–3.05 :** "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ" ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ಥಾಪನೆ ಬಗ್ಗೆ (**ವಿಜ್ಞಾನ ನಿಕಾಯದ ಎಂ.ಎಸ್ಸಿ., ಗಣಿತಶಾಸ್ತ್ರ ಅಧ್ಯಯನ**)

ನಿರ್ಣಯ: "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ" ಹೆಸರಿನಲ್ಲಿ ದತ್ತಿನಿಧಿ. ಸ್ವರ್ಣ ಪದಕ ಸ್ವರ್ಣಪದಕವನ್ನು ಸ್ಥಾಪಿಸಲು ಅನುಮತಿ ನೀಡಲು ಸಭೆಯು ನಿರ್ಣಯಿಸಿತು. ವಿಶ್ವವಿದ್ಯಾಲಯದಲ್ಲಿ ದತ್ತಿನಿಧಿಯನ್ನು ಸ್ಥಾಪಿಸಿದ ಮೇಲ್ಕಂಡ ದಾನಿಗಳಿಗೆ ವಿಶ್ವವಿದ್ಯಾಲಯದ ವತಿಯಿಂದ ಸಭೆಯಲ್ಲಿ ಅಭಿನಂದನೆ ಸಲ್ಲಿಸಲಾಯಿತು ಹಾಗೂ ಧನ್ಯವಾದ ಪತ್ರ ಕಳಿಸಲು ತೀರ್ಮಾನಿಸಲಾಯಿತು.

**2021:ಎಸಿ–3.06:** "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ" ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ಥಾಪನೆ ಬಗ್ಗೆ (**ವಾಣಿಜ್ಯ ನಿಕಾಯದ ಎಂ.ಕಾಂ., ಅಧ್ಯಯನ**)

ನಿರ್ಣಯ: "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ"(ವಾಣಿಜ್ಯ ನಿಕಾಯದ ಎಂ.ಕಾಂ., ಅಧ್ಯಯನ) ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ವರ್ಣಪದಕವನ್ನು ಸ್ಥಾಪಿಸಲು ಅನುಮತಿ ನೀಡಲು ಸಭೆಯು ನಿರ್ಣಯಿಸಿತು. ವಿಶ್ವವಿದ್ಯಾಲಯದಲ್ಲಿ ದತ್ತಿನಿಧಿಯನ್ನು ಸ್ಥಾಪಿಸಿದ ಮೇಲ್ಕಂಡ ದಾನಿಗಳಿಗೆ ವಿಶ್ವವಿದ್ಯಾಲಯದ ವತಿಯಿಂದ ಸಭೆಯಲ್ಲಿ ಅಭಿನಂದನೆ ಸಲ್ಲಿಸಲಾಯಿತು ಹಾಗೂ ಧನ್ಯವಾದ ಪತ್ರ ಕಳಿಸಲು ತೀರ್ಮಾನಿಸಲಾಯಿತು.

**2021:ಎಸಿ–3.07 :** "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ" ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ಥಾಪನೆ ಬಗ್ಗೆ (**ವಾಣಿಜ್ಯ ನಿಕಾಯದ ಎಂ.ಬಿ.ಎ.,. ಅಧ್ಯಯನ**)

ನಿರ್ಣಯ: "ದಿ ಗ್ರಾಜುಯೇಟ್ಸ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್, ಗೋಲ್ಡನ್ ಜುಬಲಿ"(ವಾಣಿಜ್ಯ ನಿಕಾಯದ ಎಂ.ಬಿ.ಎ.,. ಅಧ್ಯಯನ ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ವರ್ಣಪದಕವನ್ನು ಸ್ಥಾಪಿಸಲು ಅನುಮತಿ ನೀಡಲು ಸಭೆಯು ನಿರ್ಣಯಿಸಿತು. ವಿಶ್ವವಿದ್ಯಾಲಯದಲ್ಲಿ ದತ್ತಿನಿಧಿಯನ್ನು ಸ್ಥಾಪಿಸಿದ ಮೇಲ್ಕಂಡ ದಾನಿಗಳಿಗೆ ವಿಶ್ವವಿದ್ಯಾಲಯದ ವತಿಯಿಂದ ಸಭೆಯಲ್ಲಿ ಅಭಿನಂದನೆ ಸಲ್ಲಿಸಲಾಯಿತು ಹಾಗೂ ಧನ್ಯವಾದ ಪತ್ರ ಕಳಿಸಲು ತೀರ್ಮಾನಿಸಲಾಯಿತು.

**2021:ಎಸಿ-3.08** : "ಪ್ರೊ. ಎ. ರಾಮೇಗೌಡ, ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ ಕ್ಯಾಂಪಸ್" ಇವರ ಹೆಸರಿನಲ್ಲಿ ದತ್ತಿನಿಧಿ ಸ್ವರ್ಣಪದಕ ಸ್ಥಾಪನೆ ಬಗ್ಗೆ.

ನಿರ್ಣಯ: "ಪ್ರೊ. ಎ. ರಾಮೇಗೌಡ, ಸ್ನಾತಕೋತ್ತರ ಸಮಾಜಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ ಕ್ಯಾಂಪಸ್" ಇವರ ಹೆಸರಿನಲ್ಲಿ ದತ್ತಿನಿಧಿ ಸ್ವರ್ಣ ಪದಕ ಸ್ವರ್ಣಪದಕವನ್ನು ಸ್ಥಾಪಿಸಲು ಅನುಮತಿ ನೀಡಲು ಸಭೆಯು ನಿರ್ಣಯಿಸಿತು. ವಿಶ್ವವಿದ್ಯಾಲಯದಲ್ಲಿ ದತ್ತಿನಿಧಿಯನ್ನು ಸ್ಥಾಪಿಸಿದ ಮೇಲ್ಕಂಡ ದಾನಿಗಳಿಗೆ ವಿಶ್ವವಿದ್ಯಾಲಯದ ಪತಿಯಿಂದ ಸಭೆಯಲ್ಲಿ ಅಭಿನಂದನೆ ಸಲ್ಲಿಸಲಾಯಿತು ಹಾಗೂ ಧನ್ಯವಾದ ಪತ್ರ ಕಳಿಸಲು ತೀರ್ಮಾನಿಸಲಾಯಿತು.

## ಪರೀಕ್ಷಾ ವಿಭಾಗ

**2021:ಎಸಿ-3.08(ಎ)**: ಸಿ.ಬಿ.ಸಿ.ಎಸ್. ಸ್ಕೀಂನ ಸ್ನಾತಕೋತ್ತರ ಪದವಿಯ ಅಂಕಪಟ್ಟಿಯಲ್ಲಿ ಗ್ರೇಡ್ ಪರಿವರ್ತನಾ ಶೇಕಡಾವಾರು ಅಂಕಗಳನ್ನು ನಮೂದಿಸುವ ಬಗ್ಗೆ.

ಚರ್ಚೆ: ವಿಷಯ ಮಂಡಿಸಿ ಮಾತನಾಡಿದ ಕುಲಸಚಿವರು(ಪರೀಕ್ಷಾಂಗ)ರವರು ಕುವೆಂಪು ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಸ್ನಾತಕೋತ್ತರ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಅಂಕಪಟ್ಟಿಗಳಲ್ಲಿ C.B.C.S. ನಿಯಮಾವಳಿಯನ್ವಯ C.G.P.A. ಆಧಾರದ ಮೇಲೆ ಗ್ರೇಡ್‌ಗಳನ್ನು ನಮೂದಿಸುತ್ತಿದ್ದು, ವಿದ್ಯಾರ್ಥಿಗಳು ಸರ್ಕಾರವು ಕರೆಯುವ ಉದ್ಯೋಗಗಳಿಗೆ ಅರ್ಜಿ ಸಲ್ಲಿಸುವಾಗ ಅಂಕಪಟ್ಟಿಯಲ್ಲಿರುವ ಗ್ರೇಡ್ ನಮೂದಿಸುತ್ತಿರುವ ಹಿನ್ನೆಲೆಯಲ್ಲಿ ಉದ್ಯೋಗದಿಂದ ವಂಚಿತರಾಗುತ್ತಿರುವ ಅಂಶವನ್ನು ಸಭೆಯ ಗಮನಕ್ಕೆ ತಂದರು ಈ ಬಗ್ಗೆ ಸಭೆಯು ಪರಿಶೀಲಿಸಿತು. ಹಾಗೂ ಸುದೀರ್ಘವಾಗಿ ಚರ್ಚಿಸಲಾಯಿತು.

ನಿರ್ಣಯ: ಸುಧೀರ್ಘ ಚರ್ಚೆಯ ನಂತರ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ **C.B.C.S. ನಿಯಮಾವಳಿಗಳನ್ವಯ ವಿದ್ಯಾರ್ಥಿಗಳು ಪಡೆಯುವ C.G.P.A. ಗ್ರೇಡ್‌ನ್ನು ಮತ್ತು ಗ್ರೇಡ್ ಪರಿವರ್ತನಾ ಶೇಕಡಾ ಅಂಕ ಈ ಎರಡು ಅಂಶಗಳನ್ನು ಸ್ನಾತಕೋತ್ತರ ವಿದ್ಯಾರ್ಥಿಗಳ ಅಂಕಪಟ್ಟಿಯಲ್ಲಿ ನಮೂದಿಸಲು ಸಭೆಯು ತನ್ನ ಅನುಮೋದನೆ ನೀಡಿತು.**

**2021:ಎಸಿ-3.08(ಬಿ)**: ಅವಧಿ ಪೂರ್ಣಗೊಳಿಸಿದ (Double the Duration) ಡಿಪ್ಲೊಮಾ/ಸ್ನಾತಕ/ಸ್ನಾತಕೋತ್ತರ ಮತ್ತು ದೂರಶಿಕ್ಷಣ ಪದವಿ ವಿದ್ಯಾರ್ಥಿಗಳಿಗೆ ವಿಶೇಷ ಸಂದರ್ಭವೆಂದು ಪರಿಗಣಿಸಿ ಸೆಪ್ಟಂಬರ್/ಅಕ್ಟೋಬರ್ – 2021ರ ಪರೀಕ್ಷೆಗೆ ಅವಕಾಶ ನೀಡುವ ಬಗ್ಗೆ.

ನಿರ್ಣಯ: ಈ ಬಗ್ಗೆ ಸುಧೀರ್ಘವಾಗಿ ಚರ್ಚಿಸಿದ ಸಭೆಯು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಇದೊಂದು ಬಾರಿ ರೂ.3000=00ಗಳ ವಿಶೇಷ ಶುಲ್ಕ ಪಾವತಿಸಿಕೊಂಡು ವಿಶೇಷ ಸಂದರ್ಭವೆಂದು ಪರಿಗಣಿಸಿ ಅವಧಿ ಪೂರ್ಣಗೊಳಿಸಿದ (Double the Duration) ಡಿಪ್ಲೊಮಾ/ಸ್ನಾತಕ/ಸ್ನಾತಕೋತ್ತರ ಮತ್ತು ದೂರಶಿಕ್ಷಣ ಪದವಿ ವಿದ್ಯಾರ್ಥಿಗಳಿಗೆ ಸೆಪ್ಟಂಬರ್/ಅಕ್ಟೋಬರ್–2021ರ ಪರೀಕ್ಷೆಯಲ್ಲಿ ಬಾಕಿ ಉಳಿದಿರುವ ಪತ್ರಿಕೆಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲು ನಿರ್ಣಯಿಸಿತು.

**2021:ಎಸಿ-3.08(ಸಿ)**: ಬದಲಿ ಪದವಿ ಪ್ರಮಾಣ ಪತ್ರ / ಅಂಕಪಟ್ಟಿ ವಿತರಿಸುವಾಗ ಬಳಸುವ **"Duplicate"** ಪದದ ಬದಲಾವಣೆ ಮಾಡುವ ಕುರಿತು ಶೈಕ್ಷಣಿಕ ಮಂಡಳಿ ಸಭೆಗೆ ಮಂಡಿಸುತ್ತಿರುವ ಕುರಿತು.

ಚರ್ಚೆ: ಈ ಬಗ್ಗೆ ಸಭೆಯು ಸುದೀರ್ಘವಾಗಿ ಚರ್ಚಿಸಿತು. ಚರ್ಚೆಯಲ್ಲಿ ಪಾಲ್ಗೊಂಡ ಸದಸ್ಯರಾದ ಶ್ರೀ ರಾಮಚಂದ್ರ ದೇವರು ಹೆಗಡೆ – ಇವರು ಬದಲಿ ಪ್ರಮಾಣಪತ್ರ / ಅಂಕಪಟ್ಟಿ ವಿತರಿಸುವಾಗ **"Duplicate"** ಅನ್ನುವ ಪದದ ಬದಲು ಯಥಾಪ್ರತಿ / ನೈಜಪ್ರತಿ ಎಂದು ನಮೂದಿಸಿ ನೀಡಬಹುದೆಂದು ಸಭೆಗೆ ತಿಳಿಸಿದರು

ನಿರ್ಣಯ: ಈ ಬಗ್ಗೆ ವಿವರವಾಗಿ ಚರ್ಚಿಸಿದ ಸಭೆಯು **"Duplicate"** ಅನ್ನುವ ಪದದ ಬದಲು **ಮರುಮುದ್ರಿತ ಪ್ರತಿ(Re-Printed)** ಎಂದು ನಮೂದಿಸಿ ವಿದ್ಯಾರ್ಥಿಗಳಿಗೆ ಬದಲಿ ಪದವಿ ಪ್ರಮಾಣಪತ್ರ / ಅಂಕಪಟ್ಟಿ ನೀಡಬಹುದೆಂದು ಸಭೆಯು ನಿರ್ಣಯಿಸಿತು.

**2021:ಎಸಿ–3.08(ಡಿ):** ಕೋವಿಡ್–19 ನಿಂದಾಗಿ ಸ್ನಾತಕೋತ್ತರ / ಸ್ನಾತಕ ಕೋರ್ಸ್‌ಗಳ ಪರೀಕ್ಷೆ ಫಲಿತಾಂತ ನೀಡುವಲ್ಲಿ ಯು.ಜಿ.ಸಿ. ಮಾರ್ಗಸೂಚಿ / ಸರ್ಕಾರದ ಸುತ್ತೋಲೆಯನ್ವಯ ಕ್ರಮಕೈಗೊಳ್ಳುವ ಕುರಿತು.

ನಿರ್ಣಯ: ಈ ಬಗ್ಗೆ ಚರ್ಚಿಸಿದ ಸಭೆಯು ಯು.ಜಿ.ಸಿ. ಮಾರ್ಗಸೂಚಿ / ಸರ್ಕಾರದ ಸುತ್ತೋಲೆಯನ್ವಯ ಸ್ನಾತಕೋತ್ತರ / ಸ್ನಾತಕ ಕೋರ್ಸ್‌ಗಳ ಪರೀಕ್ಷೆ ನಡೆಸುವ ಮತ್ತು ಫಲಿತಾಂತ ನೀಡುವ ಕುರಿತು ಕ್ರಮಕೈಗೊಳ್ಳಲು ಕುಲಸಚಿವ(ಪರೀಕ್ಷಾಂಗ) ಇವರಿಗೆ ಅನುಮತಿ ನೀಡಲು ನಿರ್ಣಯಿಸಿತು.

**2021:ಎಸಿ–3.09: ಅಧ್ಯಕ್ಷರ ಅಪ್ಪಣೆಯ ಮೇರೆಗೆ ಇತರೆ ವಿಷಯಗಳು:**

**ಮಾನ್ಯ ವಿದ್ಯಾವಿಷಯಕ ಪರಿಷತ್ ಸದಸ್ಯರ ಪ್ರಶ್ನೆಗಳು:**

1. ಶ್ರೀಮತಿ ಗೀತಾಂಜಲಿ – ಇವರು ಚರ್ಚೆಯಲ್ಲಿ ಪಾಲ್ಗೊಂಡು AICTIE ನಿಯಮಾವಳಿ ಪ್ರಕಾರ ಎಂ.ಸಿ.ಎ. ಕೋರ್ಸ್‌ನ ಅವಧಿಯನ್ನು 03 ವರ್ಷದ ಬದಲಿಗೆ 02 ವರ್ಷಕ್ಕೆ ನಿಗದಿಪಡಿಸಲಾಗಿದ್ದು, ಅದರಂತೆ ವಿಶ್ವವಿದ್ಯಾಲಯದಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ ಎಂದು ಕೇಳಿದರು.

   ಇದಕ್ಕೆ ಉತ್ತರಿಸಿದ ಪ್ರೊ. ರಿಯಾಜ್ ಮಹಮೂದ್, ಡೀನರು ವಿಜ್ಞಾನ ನಿಕಾಯ ಇವರು ಈ ಬಗ್ಗೆ ಸಂಬಂಧಿಸಿದ ಪಠ್ಯಕ್ರಮ ಸಿದ್ದಪಡಿಸಿದ್ದು, ಅದರಂತೆ ಶೈಕ್ಷಣಿಕ ಮಂಡಳಿ ಅನುಮೋದನೆಯೊಂದಿಗೆ 2020–21ನೇ ಸಾಲಿನಿಂದ ಎಂ.ಸಿ.ಎ. 02 ವರ್ಷದ ಕೋರ್ಸ್‌ನ್ನು ಆರಂಭಿಸಲಾಗಿದೆ ಎಂದರು. ಈ ಕುರಿತು ಮಾತನಾಡಿದ ಕುಲಸಚಿವರು(ಪರೀಕ್ಷಾಂಗ)ರವರು ಎಂ.ಸಿ.ಎ ಮತ್ತು ಎಂ.ಬಿ.ಎ. ಪದವಿಗಳು ವೃತ್ತಿಪರ ಕೋರ್ಸುಗಳಾಗಿದ್ದು ಸರ್ಕಾರದ ನಿಯಮಗಳು ಮತ್ತು AICTE ನಿಯಮಗಳನ್ವಯ ಕಾರ್ಯನಿರ್ವಹಿಸಬೇಕಾಗಿದ್ದು, AICTE ಅನುಮೋದನೆ ಪಡೆಯಲು ಅಗತ್ಯವಿರುವ ಮೂಲಭೂತ ಸೌಲಭ್ಯಗಳು & ಸಂಪನ್ಮೂಲಗಳನ್ನು ಕ್ರೋಢೀಕರಿಸಿ ಅನುಮೋದನೆಗೆ ಸಲ್ಲಿಸಬೇಕಾಗಿರುತ್ತದೆ ಎಂದರು.

2. ಶ್ರೀಮತಿ ಮಮತ ಸಾಲಿ – ಇವರು ಚರ್ಚೆಯಲ್ಲಿ ಪಾಲ್ಗೊಂಡು ಸ್ನಾತಕೋತ್ತರ ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗದಲ್ಲಿ ಕಳೆದ ಎರಡು ಶೈಕ್ಷಣಿಕ ಸಾಲಿನಲ್ಲಿ ಪಿ.ಹೆಚ್.ಡಿ. ಕೋರ್ಸ್‌ಗೆ ಅರ್ಜಿ ಆಹ್ವಾನಿಸದೇ ಇರುವ ಸಭೆಯ ಗಮನಕ್ಕೆ ತಂದರು.

   ಇದಕ್ಕೆ ಉತ್ತರಿಸಿದ ಮಾನ್ಯ ಕುಲಸಚಿವರು ಈ ಬಗ್ಗೆ ವಿಭಾಗಾಧ್ಯಕ್ಷರಿಂದ ಮಾಹಿತಿ ಪಡೆದಿದ್ದು, ಪ್ರಸ್ತುತ ವಿಭಾಗದಲ್ಲಿ ಒಬ್ಬರೇ ಪ್ರಾಧ್ಯಾಪಕರಿದ್ದು ಅವರೊಬ್ಬರೇ ಸಂಶೋಧನಾ ಮಾರ್ಗದರ್ಶಕರಾಗಿರುವುದರಿಂದ ಅವರ ಬಳಿ ಯಾವುದೇ ರಿಕ್ತ ಸ್ಥಾನ ಇಲ್ಲದೇ ಇರುವುದರಿಂದ 2020–21ನೇ ಶೈಕ್ಷಣಿಕ ಸಾಲಿನಲ್ಲಿ ಅರ್ಜಿಯನ್ನು ಆಹ್ವಾನಿಸಿರುವುದಿಲ್ಲವೆಂದು ತಿಳಿಸಿದರು.

3. **ಡಾ. ಅಶೋಕ್ ಡಿ. ರೇವಣ್‌ಕರ್**– ಇವರು ಮಾತನಾಡಿ ಕುವೆಂಪು ವಿಶ್ವವಿದ್ಯಾಲಯದಲ್ಲಿ ಪಿ.ಹೆಚ್.ಡಿ. ವ್ಯಾಸಂಗ ಮಾಡುತ್ತಿರುವ ಅಭ್ಯರ್ಥಿಗಳಿಗೆ ಪಿಹೆಚ್.ಡಿ ಮಹಾಪ್ರಬಂಧವನ್ನು ಸಲ್ಲಿಸಲು ಅವಧಿ ವಿಸ್ತರಣೆಗೆ ಕೋವಿಡ್–19 ಹಿನ್ನೆಲೆಯಲ್ಲಿ ಯಾವುದೇ ಹೆಚ್ಚುವರಿ ಶುಲ್ಕವನ್ನು ವಿಧಿಸಬಾರದೆಂದು ಕೋರಿದರು.

ಈ ಬಗ್ಗೆ ಸುಧೀರ್ಘವಾಗಿ ಸಭೆಯಲ್ಲಿ ಚರ್ಚಿಸಿದ ನಂತರ ಉತ್ತರಿಸಿದ ಕುಲಸಚಿವ(ಪರೀಕ್ಷಾಂಗ)ರವರು ಸರ್ಕಾರದ ಹಾಗೂ ಯು.ಜಿ.ಸಿ.ಯ ಮಾರ್ಗಸೂಚಿಯಂತೆ ಪರಿಶೀಲಿಸಿ ಸೂಕ್ತ ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

4. **ಪ್ರೊ. ಜಯರಾಮ ಭಟ್ ಬಿ.** ಪ್ರಾಧ್ಯಾಪಕರು ಹಾಗೂ ಡೀನರು ಕಲಾ ನಿಕಾಯ–ಇವರು ತಮ್ಮ ದಿವಂಗತ ಪತ್ನಿಯ ಸ್ಮರಣಾರ್ಥ ಒಂದು ದತ್ತಿ ನಿಧಿ ಸ್ವರ್ಣ ಪದಕ ಸ್ಥಾಪನೆಗೆ ಅವಕಾಶ ಕೋರಿದರು. ಇದಕ್ಕೆ ಸಭೆಯು ಒಪ್ಪಿಗೆ ಸೂಚಿಸಿತು.

ಮಾನ್ಯ ಕುಲಪತಿಗಳು ಮಾತನಾಡಿ ಕುವೆಂಪು ವಿಶ್ವವಿದ್ಯಾಲಯದಲ್ಲಿ ಹೊಸದಾಗಿ ಜಿ.ಎಸ್.ಟಿ., ಫುಡ್ ಟೆಕ್ನಾಲಜಿ, ನ್ಯಾನೋ ಟೆಕ್ನಾಲಜಿ ಸೇರಿ ಹೊಸದಾಗಿ 15 ಡಿಪ್ಲೋಮಾ ಕೋರ್ಸ್‌ಗಳನ್ನು ಆರಂಭಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿ ಇವುಗಳಿಗೆ ಸಂಬಂಧಿಸಿದ ಪಠ್ಯಕ್ರಮವನ್ನು ರಚಿಸಲು ಸಂಬಂಧಪಟ್ಟ ಡೀನರುಗಳಿಗೆ ತಿಳಿಸಿದರು ಇದನ್ನು ಸಭೆಯು ಅನುಮೋದಿಸಿತು.

ನಂತರ ಮಾನ್ಯ ಕುಲಸಚಿವರು(ಪರೀಕ್ಷಾಂಗ)ರವರು ಮಾತನಾಡುತ್ತಾ, 2019–20ನೇ ಸಾಲಿನಲ್ಲಿ ದೂರಶಿಕ್ಷಣದ ಮೂಲಕ ಪ್ರವೇಶ ಪಡೆದ ವಿವಿಧ ಸ್ನಾತಕ ಪದವಿಯ ಪ್ರಥಮ ಮತ್ತು ದ್ವಿತೀಯ ವರ್ಷದ ಮತ್ತು ಸ್ನಾತಕೋತ್ತರ ಪದವಿಯ ಪ್ರಥಮ ವರ್ಷದ (ಪ್ರಥಮ ಮತ್ತು ದ್ವಿತೀಯ ಆವೃತಿ) ವಿದ್ಯಾರ್ಥಿಗಳಿಗೆ ಕೋವಿಡ್–19ರ ಹಿನ್ನೆಲೆಯಲ್ಲಿ ಪರೀಕ್ಷೆಯನ್ನು ನಡೆಸಿರುವುದಿಲ್ಲ ಹಾಗೂ ಫಲಿತಾಂಶ ಪ್ರಕಟಿಸಿರುವುದಿಲ್ಲ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶೀಘ್ರವಾಗಿ ಈ ಬಗ್ಗೆ ಕ್ರಮ ಕೈಗೊಳ್ಳಬೇಕಾಗಿದೆ ಎಂದರು. ಈ ಬಗ್ಗೆ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ದೂರಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರಾದ ಪ್ರೊ. ಎಸ್.ಎನ್. ಯೋಗೀಶ್ – ಇವರು ಕೋವಿಡ್–19 ಹಿನ್ನೆಲೆಯಲ್ಲಿ ಇದೊಂದು ವಿಶೇಷ ಸಂದರ್ಭವೆಂದು ಪರಿಗಣಿಸಿ ಸರ್ಕಾರದ ಸುತ್ತೋಲೆಯನ್ವಯ ಆಂತರಿಕ ಅಂಕಗಳ ಆಧಾರದ ಮೇಲೆ (Promote Result) ಫಲಿತಾಂಶ ಪ್ರಕಟಿಸಲು ಸಭೆಯು ಅನುಮೋದನೆ ನೀಡಬೇಕೆಂದು ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ಸದಸ್ಯರಾದ ಪ್ರೊ. ಹೆಚ್.ಎಸ್. ಭೋಜ್ಯಾನಾಯ್ಕ್‌ರವರು ಈ ರೀತಿ ಪರೀಕ್ಷೆ ನಡೆಸದೆ ಆಂತರಿಕ ಅಂಕಗಳ ಆಧಾರದ ಮೇಲೆ ದೂರ ಶಿಕ್ಷಣದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಪ್ರಕಟಿಸುವ ಕ್ರಮವು ಅಷ್ಟು ಸಮಂಜಸವಲ್ಲವೆಂದು ಆಕ್ಷೇಪ ವ್ಯಕ್ತಪಡಿಸಿದರು. ಚರ್ಚೆಯಲ್ಲಿ ಪಾಲ್ಗೊಂಡ ಬಹುತೇಕ ಸದಸ್ಯರು ಇದಕ್ಕೆ ಸಹಮತ ವ್ಯಕ್ತಪಡಿಸಿದರು. ನಂತರ ಈ ಬಗ್ಗೆ ಸುಧೀರ್ಘ ಚರ್ಚೆ ನಡೆಸಲಾಯಿತು. ಇದಕ್ಕೆ ಉತ್ತರಿಸಿದ ಕುಲಸಚಿವ(ಪರೀಕ್ಷಾಂಗ) ರವರು ಈ ಬಗ್ಗೆ ಸರ್ಕಾರದ ಆದೇಶ ಹಾಗೂ ಯು.ಜಿ.ಸಿ.ಯ ನಿಯಮಗಳು/ಮಾರ್ಗಸೂಚಿಗಳನ್ನು ಪರಿಶೀಲಿಸಿ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಹಾಗೂ ದೂರ ಶಿಕ್ಷಣ ನಡೆಸುತ್ತಿರುವ ಇತರ ವಿಶ್ವವಿದ್ಯಾಲಯಗಳು ತೆಗೆದುಕೊಂಡಿರುವ ಕ್ರಮಗಳನ್ನು ಅವಲೋಕಿಸುತ್ತಿದ್ದು ನಂತರ ಸೂಕ್ತ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದರು. ಕೊನೆಯಲ್ಲಿ ಈ ಕುರಿತು ಕರ್ನಾಟಕ ಸರ್ಕಾರ ಹಾಗೂ ಯು.ಜಿ.ಸಿ.ಯಿಂದ ಮಾರ್ಗಸೂಚಿ ಬಂದಲ್ಲಿ ಅಥವಾ ಈ ಕುರಿತು ಪತ್ರ ವ್ಯವಹಾರ ನಡೆಸಿ ಸರ್ಕಾರ ಹಾಗೂ ಯು.ಜಿ.ಸಿ.ಯಿಂದ ಸಲಹೆ ಮತ್ತು ನಿರ್ದೇಶನ ಪಡೆದು ನಂತರ ಇದರ ಸಾಧಕ–ಬಾಧಕಗಳನ್ನು ಕುರಿತು ಅಧ್ಯಯನ ಮಾಡಿ ಮುಂದಿನ ಕ್ರಮ ಜರುಗಿಸಲು ತೀರ್ಮಾನಿಸಲಾಯಿತು.

ಮುಂದುವರೆದಂತೆ, ಮಾತನಾಡಿದ ಮಾನ್ಯ ಕುಲಪತಿಗಳು ಎಲ್ಲಾ ನಿಕಾಯದಡಿ ಬರುವ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಅವರ ಜ್ಞಾನ ಮತ್ತು ವೃತ್ತಿ ಕೌಶಲ್ಯವನ್ನು ಹೆಚ್ಚಿಸುವಂತಹ ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳನ್ನು ಆಹ್ವಾನಿಸಿ ವಿಶೇಷ ಉಪನ್ಯಾಸ ಹಾಗೂ ತರಬೇತಿಯನ್ನು ಏರ್ಪಡಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸಭೆಯು ತನ್ನ ಸಹಮತವನ್ನು ವ್ಯಕ್ತಪಡಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ, ಮಾನ್ಯ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದರು.

ಸಹಿ/--
ಕುಲಪತಿಗಳು

ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.